ಅಧ್ಯಕ್ಷರು :- ಉಳಿದ ಇನ್ನಿಬ್ಬರು ಸದಸ್ಯರು ಅರ್ಧಗಂಟೆ ನಂತರ ಪ್ರಮಾಣ ವಚನ ಸ್ವೀಕಾರ ಮಾಡುತ್ತೇವೆ ಎಂದು ಕೇಳಿಕೊಂಡಿದ್ದಾರೆ. ಅರ್ಧ ಗಂಟೆ ನಂತರ ಅವರು ಪ್ರಮಾಣ ವಚನ ಸ್ವೀಕರಿಸುತ್ತಾರೆ.

2. ಸಂತಾಪ ಸೂಚನೆ

ವಿಷಯ :- ವಿಧಾನಸಭೆಯ ಮಾಜಿ ಸದಸ್ಯ ವಿ.ಎಸ್.ಕುಬಿಹಾಳ್ ಅವರ ನಿಧನದ ಬಗ್ಗೆ.

ಅಧ್ಯಕ್ಷರು :- ವಿಧಾನಸಭೆಯ ಮಾಜಿ ಸದಸ್ಯರಾಗಿದ್ದ ಶ್ರೀ ವಿ.ಎಸ್.ಕುಬಿಹಾಳ್ ಅವರು ದಿನಾಂಕ: 8.11.2008 ರಂದು ನಿಧನರಾಗಿರುವುದನ್ನು ಅತ್ಯಂತ ವಿಷಾದದಿಂದ ತಿಳಿಸಬಯಸುತ್ತೇನೆ.

1930ನೇ ಮೇ 4 ರಂದು ಧಾರವಾಡ ಜಿಲ್ಲೆ ಕುಂದಗೋಳ್ ತಾಲ್ಲೂಕು ಮತ್ತಿಘಟ್ಟಿ ಗ್ರಾಮದಲ್ಲಿ ಜನಿಸಿದ್ದ ಅವರು ವೃತ್ತಿಯಲ್ಲಿ ಕೃಷಿಕರಾಗಿದ್ದರು. ಶ್ರೀಯುತರು ಮತ್ತಿಘಟ್ಟ ಗ್ರಾಮ ಪಂಚಾಯಿತಿ ಹಾಗೂ ತಾಲ್ಲೂಕು ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾಗಿ ಪ್ರಾಥಮಿಕ ಭೂ ಅಭಿವೃದ್ಧಿ ಬ್ಯಾಂಕಿನ ನಿರ್ದೇಶಕರಾಗಿ ಸೇವೆ ಸಲ್ಲಿಸಿದ್ದು, ಏಳನೇ ವಿಧಾನಸಭೆಗೆ ಕುಂದಗೋಳ್ ಕ್ಷೇತ್ರದಿಂದ ಚುನಾಯಿತರಾಗಿದ್ದರು.

ಮೃತರ ಗೌರವಾರ್ಥ ಮಾನ್ಯ ಸದಸ್ಯರು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೋರುತ್ತೇನೆ.

(ಈ ಹಂತದಲ್ಲಿ ಇಡೀ ಸದನ ಒಂದು ನಿಮಿಷ ಮೌನವನ್ನು ಆಚರಿಸಿತು)

ಅಧ್ಯಕ್ಷರು :- ಈ ಸದನವು ಅಂಗೀಕರಿಸಿದ ಸಂತಾಪ ಸೂಚಕ ನಿರ್ಣಯವನ್ನು ಮೃತರ ಕುಟುಂಬ ವರ್ಗದವರಿಗೆ ಕಳುಹಿಸಿಕೊಡಲಾಗುವುದು.

3. ಕಾರ್ಯದರ್ಶಿಯವರ ವರದಿ

ಶ್ರೀ ಎಸ್.ಬಿ. ಪಾಟೀಲ್,ಕಾರ್ಯದರ್ಶಿ :- ಗೌರವಾನ್ವಿತ ಸಭಾಧ್ಯಕ್ಷರ ಅನುಮೋದನೆಯ ಮೇರೆಗೆ ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಈಗ ಸಭೆಯ ಮುಂದೆ ಮಂಡಿಸುತ್ತೇನೆ.